\

# ಕರ್ನಾಟಕ ಸರ್ಕಾರ

## ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸೇವೆಗಳ ನಿರ್ದೇಶನಾಲಯ, ಆರೋಗ್ಯ ಸೌಧ, ಮಾಗಡಿ ರಸ್ತೆ, ಬೆಂಗಳೂರು-23.

ಸಂಖ್ಯೆ:ಆಪಿಕ(1)104/2022-23

ದಿನಾಂಕ: 15-09-2022

**ಅಂತಿಮ ಸೂಚನಾ ಪತ್ರ**

ಇವರಿಗೆ,

ವಿಷಯ: ಕೆ.ಪಿ.ಎಸ್.ಸಿ ವತಿಯಿಂದ ಪ್ರಥಮ ದರ್ಜೆ ಸಹಾಯಕರ ಹುದ್ದೆಗೆ ಆಯ್ಕೆಯಾದ ಅಭ್ಯರ್ಥಿಗಳ ಮೂಲ ದಾಖಲೆಗಳನ್ನು ಪರಿಶೀಲನೆ ಮಾಡುವ ಬಗ್ಗೆ.

ಉಲ್ಲೇಖ:

1. ಕಾರ್ಯದರ್ಶಿ, ಕರ್ನಾಟಕ ಲೋಕ ಸೇವಾ ಆಯೋಗ, ಬೆಂಗಳೂರು ಇವರ ಪತ್ರ ಸಂಖ್ಯೆ:ಇ(2)56-87/2022-23/ಪಿಎಸ್‌ಸಿ, ದಿನಾಂಕ:20.06.2022.
2. ಸಮ ಪತ್ರ ಸಂಖ್ಯೆಯ ದಿನಾಂಕ:04.08.2022.

*****

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಉಲ್ಲೇಖಿತ ಪತ್ರದಲ್ಲಿ ಪ್ರಥಮ ದರ್ಜೆ ಸಹಾಯಕರ ಹುದ್ದೆಗೆ ನೇಮಕಾತಿ ಮಾಡುವ ಸಂಬಂಧ ಸ್ಪರ್ಧಾತ್ಮಕ ಪರೀಕ್ಷೆ ನಡೆಸಿ ಅಂತಿಮ ಆಯ್ಕೆ ಪಟ್ಟಿಯನ್ನು ಪ್ರಕಟಿಸಿ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸೇವೆಗಳ ಇಲಾಖೆಗೆ ಹಂಚಿಕೆಯಾಗಿರುವ 176 ಅಭ್ಯರ್ಥಿಗಳ ಪಟ್ಟಿಯನ್ನು ಸಲ್ಲಿಸಿ ಮೂಲ ಪ್ರಮಾಣ ಪತ್ರಗಳು ಹಾಗೂ ಅದರ ನೈಜತೆಯನ್ನು ನಿಯಮಾನುಸಾರ ಪರಿಶೀಲಿಸಿದ ನಂತರವೇ ನೇಮಕಾತಿ ಮಾಡಿಕೊಳ್ಳಲು ಸೂಚಿಸಲಾಗಿರುತ್ತದೆ.

ಅದಕಾರಣ ಉಲ್ಲೇಖ(2)ರಲ್ಲಿ ನೀವು ಕೆ.ಪಿ.ಎಸ್.ಸಿಗೆ ಅರ್ಜಿಸಲ್ಲಿಸಿದ ಸಂದರ್ಭದಲ್ಲಿ ಸಲ್ಲಿಸಿರುವ ಎಲ್ಲಾ ಮೂಲ ದಾಖಲೆಗಳು ಹಾಗೂ ಅದರ ಎರಡು ಜೊತೆ ಜೆರಾಕ್ಸ್ (ದೃಢೀಕೃತ) ಪ್ರತಿಗಳೊಂದಿಗೆ ದಿನಾಂಕ:18.08.2022 ರಂದು 9:30 ಘಂಟೆಗೆ ರಾಜ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ತರಬೇತಿ ಸಂಸ್ಥೆ ಸೆಮಿನರ್ ಹಾಲ್, ಕುಷ್ಠರೋಗ ಆಸ್ಪತ್ರೆ ಆವರಣ, ಮಾಗಡಿ ರಸ್ತೆ, ಬೆಂಗಳೂರು ಇಲ್ಲಿ ಮೂಲ ದಾಖಲೆಗಳ ಪರಿಶೀಲನೆಗೆ ಹಾಜರಾಗಲು ಸೂಚಿಸಲಾಗಿತ್ತು. ಅಂದು ಗೈರು ಹಾಜರಾದ ಅಭ್ಯರ್ಥಿಗಳಿಗೆ ಮತ್ತೊಮ್ಮೆ ಮೂಲ ದಾಖಲೆಗಳ ಪರಿಶೀಲನೆಗೆ **ದಿನಾಂಕ:26.09.2022** ರಂದು ಏರ್ಪಡಿಸಿದ್ದು, **ಸಮಯ: ಬೆಳಗ್ಗೆ 10:30 ಘಂಟೆಗೆ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸೇವೆಗಳ ನಿರ್ದೇಶನಾಲಯ, ಆರೋಗ್ಯ ಸೌಧ, ಮಾಗಡಿ ರಸ್ತೆ, ಬೆಂಗಳೂರು ಇಲ್ಲಿನ 5ನೇ ಮಹಡಿಯಲ್ಲಿ ಹಾಜರಾಗಲು ಅಂತಿಮವಾಗಿ ಸೂಚಿಸಿದೆ.**

**ಅಭ್ಯರ್ಥಿಗಳು ಕೆ.ಪಿ.ಎಸ್.ಸಿ ಗೆ ಆನ್-ಲೈನ್‌ನಲ್ಲಿ ಅರ್ಜಿ ಸಲ್ಲಿಸಿ ಕ್ಲೇಮ ಮಾಡಿರುವ ಹಾಗೂ ಕೆ.ಪಿ.ಎಸ್.ಸಿ ರವರು ಮೂಲ ದಾಖಲೆಗಳನ್ನು ಪರಿಶೀಲಿಸಿದ ಸಂದರ್ಭದಲ್ಲಿ ಹಾಜರುಪಡಿಸಿದ ಕೆಳಕಂಡ ಎಲ್ಲಾ ಮೂಲ ದಾಖಲೆಗಳನ್ನು ಹಾಜರುಪಡಿಸತಕ್ಕದ್ದು.**

1. ಜನ್ಮ ದಿನಾಂಕದ ಪೂರಕ ದಾಖಲೆ ಎಸ್.ಎಸ್.ಎಲ್.ಸಿ ಅಂಕಪಟ್ಟಿ ಅಥವಾ ತತ್ಸಮಾನ ಪರೀಕ್ಷೆಯ ಪ್ರಮಾಣ ಪತ್ರ. ಅಥವಾ ಶಾಲಾ ವರ್ಗಾವಣೆ ಪ್ರಮಾಣ ಪತ್ರ.

2. ಹುದ್ದೆಗೆ ನಿಗದಿಪಡಿಸಿರುವ ವಿದ್ಯಾರ್ಹತೆಯ ಎಲ್ಲಾ ಶೈಕ್ಷಣಿಕ/ಪದವಿಯ ದಾಖಲೆಗಳು.
3. ಮೀಸಲಾತಿ ಕೋರಿದ್ದಲ್ಲಿ ಸಂಬಂಧಪಟ್ಟ ತಹಶೀಲ್ದಾರ್ ನೀಡಿದ ಆದಾಯ/ಜಾತಿ ಪ್ರಮಾಣ ಪತ್ರಗಳು: ಅ) ಪರಿಶಿಷ್ಟ ಜಾತಿ/ಪರಿಶಿಷ್ಟ ಪಂಗಡ, ಪ್ರವರ್ಗ-1ರ, ಪ್ರವರ್ಗ-2ಎ, 2ಬಿ, 3ಎ,3ಬಿ
4. ಗ್ರಾಮೀಣ ಪ್ರಮಾಣ ಪತ್ರ/ಸಾಮಾನ್ಯ ವರ್ಗದಡಿ ಗ್ರಾಮೀಣ ಮೀಸಲಾತಿ ಕೋರಿರುವ ಅಭ್ಯರ್ಥಿಗಳು ಮೇಲುಸ್ಥರಕ್ಕೆ ಸೇರಿಲ್ಲವೆಂಬ ಬಗ್ಗೆ (Creamy Layer) ಸಂಬಂಧಿಸಿದ ಪ್ರಮಾಣ ಪತ್ರ.
5. ಕನ್ನಡ ಮಾಧ್ಯಮ ವ್ಯಾಸಂಗ ಪ್ರಮಾಣ ಪತ್ರ.
6. ಅಂಗವಿಕಲ ಅಭ್ಯರ್ಥಿ ಪ್ರಮಾಣ ಪತ್ರ.
7. ಯೋಜನಾ ನಿರಾಶ್ರಿತರ ಪ್ರಮಾಣ ಪತ್ರ.
8. ಮಾಜಿ ಸೈನಿಕರ ಮೀಸಲಾತಿ ಪ್ರಮಾಣ ಪತ್ರ.
9. ಸೇವಾನಿರತ ಅಭ್ಯರ್ಥಿಗಳಿಗೆ ಸಂಬಂಧಿಸಿದಂತೆ ನೇಮಕಾತಿ ಪ್ರಾಧಿಕಾರದಿಂದ ಪಡೆದ ನಿರಾಕ್ಷೇಪಣಾ ಪ್ರಮಾಣ ಪತ್ರ.

**ಷರತ್ತುಗಳು:-**

1) ಮೂಲದಾಖಲಾತಿಗಳೊಂದಿಗೆ ದೃಢೀಕತ ದ್ವಿಪ್ರತಿಯ ಜೆರಾಕ್ಸ್ ಪ್ರತಿಯನ್ನು ಮತ್ತು ಎರಡು ಪಾಸ್-ಪೋರ್ಟ್ ಅಳತೆಯ ಇತ್ತೀಚಿನ ಭಾವಚಿತ್ರ ಹಾಗೂ ಯಾವುದಾದರೂ ಒಂದು ಗುರುತಿನ ಚೀಟಿಯನ್ನು ಮೂಲ ದಾಖಲಾತಿ ಪರಿಶೀಲನೆಯ ಸಮಯದಲ್ಲಿ ಹಾಜರುಪಡಿಸತಕ್ಕದ್ದು.
2) ಮೂಲದಾಖಲಾತಿ ಪರಿಶೀಲನೆಗೆ ಹಾಜರಾಗಲು ಅಂಚೆ ಮುಲಕ ಕಳುಹಿಸಿರುವ ಸೂಚನಾ ಪತ್ರವನ್ನು ಹಾಜರುಪಡಿಸತಕ್ಕದ್ದು.
3) ಮೂಲ ದಾಖಲಾತಿ ಪರಿಶೀಲನೆಗೆ ನಿಗದಿಪಡಿಸಿದ ದಿನಾಂಕದಂದೇ ಕಡ್ಡಾಯವಾಗಿ ಹಾಜರಾಗತಕ್ಕದ್ದು, ಗೈರು ಹಾಜರಾದವರಿಗೆ ಮತ್ತೊಂದು ಅವಕಾಶವನ್ನು ನೀಡಲಾಗುವುದಿಲ್ಲ.
4) ಎಲ್ಲಾ ಮೂಲ ದಾಖಲೆಗಳ ನೈಜತೆಯ ವರದಿಯನ್ನು ಸಂಬಂಧಪಟ್ಟ ಪ್ರಾಧಿಕಾರಿಗಳಿಂದ ಸ್ವೀಕೃತವಾದ ನಂತರವೇ ಅಭ್ಯರ್ಥಿಗಳ ಮಾಹಿತಿಯನ್ನು ಕೃಢೀಕರಿಸಿ ಸ್ಥಳನಿಯುಕ್ತಿಗಳಿಸಿ ನೇಮಕಾತಿ ಮಾಡಲಾಗುವುದು.

**ವಿಶೇಷ ಸೂಚನೆ:-** ಮೂಲ ದಾಖಲೆಗಳ ಪರಿಶೀಲನೆಗೆ ಹಾಜರಾಗುವ ಅಭ್ಯರ್ಥಿಗಳು ಕಡ್ಡಾಯವಾಗಿ ಮಾಸ್ಕ್ ಧರಿಸತಕ್ಕದ್ದು, ಹಾಗೂ ಪರಿಶೀಲನೆ ಸ್ಥಳದಲ್ಲಿ ಕಡ್ಡಾಯವಾಗಿ ಶಿಸ್ತು ಮತ್ತು ಸಾಮಾಜಿಕ ಅಂತರವನ್ನು ಕಾಪಾಡಿ ಕೊಳ್ಳತಕ್ಕದ್ದು.

**ನಿರ್ದೇಶಕರು,**
ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸೇವೆಗಳು,
ಬೆಂಗಳೂರು.